ದಿಃ 04.11.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಹೆಚ್.ಆರ್.ಸಿ., ವಕೀಲರಿಂದ ಅರ್ಜಿದಾರರ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.1 ಎಂದು ಗುರುತಿಸಲಾಯಿತು, ದೂರಿನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.2 ಎಂದು ಗುರುತಿಸಲಾಯಿತು, ಸ್ವತ್ತಿನ ಪಟ್ಟಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.3 ಎಂದು ಗುರುತಿಸಲಾಯಿತು, ಅಪಘಾತದ ಸೂಚನಾ ಪತ್ರವನ್ನು ಹಾಜರು ಮಾಡಿದ್ದು ನಿ.ಪಿ.4 ಎಂದು ಗುರುತಿಸಲಾಯಿತು, ಮಹಜರ್ ನ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.5 ಎಂದು ಗುರುತಿಸಲಾಯಿತು, ಶವ ತನಿಖಾ ವರದಿಯನ್ನು ಹಾಜರು ಮಾಡಿದ್ದು ನಿ.ಪಿ.6 ಎಂದು ಗುರುತಿಸಲಾಯಿತು, ವಾಹನ ತಪಾಸಣಾ ವರದಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.7 ಎಂದು ಗುರುತಿಸಲಾಯಿತು, ಅಂತಿಮ ವರದಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ನಿ.ಪಿ.8 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ದಿಃ 17.02.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಹೆಚ್.ಆರ್.ಸಿ., ವಕೀಲರಿಂದ ಅರ್ಜಿದಾರರ ಪರವಾಗಿ

3. ನನ್ನ ತಾಯಿಯ ಬ್ಯಾಂಕ್ ಪಾಸ್ ಪುಸ್ತಕವನ್ನು ಹಾಜರು ಮಾಡಿದ್ದು ನಿ.ಪಿ.9 ಎಂದು ಗುರುತಿಸಲಾಯಿತು, ನನ್ನ ತಾಯಿಯ ಆಧಾರ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.10 ಎಂದು ಗುರುತಿಸಲಾಯಿತು, ನನ್ನ ತಾಯಿಯ ಪಾನ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.11 ಎಂದು ಗುರುತಿಸಲಾಯಿತು, ನನ್ನ ಅಕ್ಕನ ಬ್ಯಾಂಕ್ ಪಾಸ್ ಪುಸ್ತಕವನ್ನು ಹಾಜರು ಮಾಡಿದ್ದು ನಿ.ಪಿ.12 ಎಂದು ಗುರುತಿಸಲಾಯಿತು, ನನ್ನ ಅಕ್ಕನ ಆಧಾರ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.13 ಎಂದು ಗುರುತಿಸಲಾಯಿತು, ನನ್ನ ಅಕ್ಕನ ಪಾನ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.14 ಎಂದು ಗುರುತಿಸಲಾಯಿತು, ನನ್ನ ಅಣ್ಣನ ಬ್ಯಾಂಕ್ ಪಾಸ್ ಪುಸ್ತಕವನ್ನು ಹಾಜರು ಮಾಡಿದ್ದು ನಿ.ಪಿ.15 ಎಂದು ಗುರುತಿಸಲಾಯಿತು, ನನ್ನ ಅಣ್ಣನ ಆಧಾರ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.16 ಎಂದು ಗುರುತಿಸಲಾಯಿತು, ನನ್ನ ಅಣ್ಣನ ಪಾನ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.17 ಎಂದು ಗುರುತಿಸಲಾಯಿತು, ನನ್ನ ಬ್ಯಾಂಕ್ ಪಾಸ್ ಪುಸ್ತಕವನ್ನು ಹಾಜರು ಮಾಡಿದ್ದು ನಿ.ಪಿ.18 ಎಂದು ಗುರುತಿಸಲಾಯಿತು, ನನ್ನ ಆಧಾರ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.19 ಎಂದು ಗುರುತಿಸಲಾಯಿತು, ನನ್ನ ಪಾನ್ ಕಾರ್ಡು ಹಾಜರು ಮಾಡಿದ್ದು ನಿ.ಪಿ.20 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಶ್ರೀ ಹೆಚ್.ಕೆ.ಡಿ. ವಕೀಲರಿಂದ ಎದುರುದಾರರ ಪರವಾಗಿ

4. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿರುತ್ತಾರೆ, ನೀಡಲಾಗಿದೆ.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ದಿಃ 24.03.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

<u>ಪಾಟೀ ಸವಾಲು ಶ್ರೀ ಸಿ.ಒ.ವೈ ವಕೀಲರ ಪರವಾಗಿ ಶ್ರೀ ಎಂ.ವೈ.ಎಸ್. ವಕೀಲರಿಂದ **2** ನೇ ಎದುರುದಾರರ ಪರವಾಗಿ</u>

5. ಮೃತ ಕಾಳಯ್ಯ ನನ್ನ ತಂದೆಯಾಗಿರುತ್ತಾರೆ. ನನ್ನ ತಂದೆಗೆ ಒಟ್ಟು 3 ಜನ ಮಕ್ಕಳು ಇರುತ್ತೇವೆ. ನನ್ನ ಅಣ್ಣನ ಹೆಸರು ಪ್ರವೀಣ್ ಕುಮಾರ್ ಆಗಿರುತ್ತದೆ. 1 ನೇ ಅರ್ಜಿದಾರರು ನನ್ನ ತಾಯಿಯಾಗಿರುತ್ತಾರೆ. 2 ನೇ ಅರ್ಜಿದಾರರು ನನ್ನ ಅಕ್ಕಳಾಗಿರುತ್ತಾಳೆ. 3 ನೇ ಅರ್ಜಿದಾರರು ದಿಃ 05.04.1992 ರಲ್ಲಿ ಜನಿಸಿರುತ್ತಾನೆ. ನನ್ನ ತಂದೆಯ ವಿವಾಹ ಯಾವ ವರ್ಷ ಆಗಿರುತ್ತದೆ ಎಂದು ನನಗೆ ಗೊತ್ತಿಲ್ಲ. ನನ್ನ ತಂದೆಗೆ ಮದುವೆಯಾಗುವ ಸಮಯದಲ್ಲಿ 25 ವರ್ಷ ವಯಸ್ಸಾಗಿತ್ತು. ನನ್ನ ತಾಯಿಗೆ ಮದುವೆಯಾಗುವಾಗ ಎಷ್ಟು ವಯಸ್ಸಾಗಿತ್ತು ಎಂದು ನನಗೆ ನೆನಪಿಲ್ಲ. ನನ್ನ ತಂದೆಯು ಮೃತಪಡುವಾಗ ಅವರಿಗೆ 55 ವರ್ಷ ವಯಸ್ಸಾಗಿತ್ತು. ಅರ್ಜಿದಾರರು ಕಾಳಯ್ಯ ರವರ ವಾರಸುದಾರರು ಎಂದು ತೋರಿಸುವ ಬಗ್ಗೆ ನ್ಯಾಯಾಲಯಕ್ಕೆ ದಾಖಲೆ ಹಾಜರು ಮಾಡಿರುತ್ತೇನೆ. ಕಾಳಯ್ಯ ರವರ ವಂಶವೃಕ್ಷದ ದಾಖಲಾತಿಯನ್ನು ಪಡೆದಿರುತ್ತೇನೋ ಇಲ್ಲವೋ ನನಗೆ ಗೊತ್ತಿಲ್ಲ. ನಾನು Staff Nurse ವಿದ್ಯಾಭ್ಯಾಸ ಮಾಡಿರುತ್ತೇನೆ. ನನ್ನ ತಂದೆಯ ವಯಸ್ಸನ್ನು ತೋರಿಸುವ ಬಗ್ಗೆ ನನ್ನ ಬಳಿ ದಾಖಲಾತಿ ಇರುತ್ತದೆ. ಅದನ್ನು ಹಾಜರು ಮಾಡಲು ನನಗೆ ಯಾವುದೇ ಅಭ್ಯಂತರ ಇರುವುದಿಲ್ಲ. ನನ್ನ ತಂದೆಗೆ ಅಪಘಾತದ ಸಮಯದಲ್ಲಿ 60 ವರ್ಷಕ್ಕಿಂತಲು ಹೆಚ್ಚು ಆಗಿತ್ತು ಮತ್ತು ಯಾವುದೇ ಕೆಲಸ ಮಾಡಲು ಸಾಧ್ಯವಾಗುತ್ತಿರಲಿಲ್ಲ ಎಂದರೆ ಸರಿಯಲ್ಲ. ನನ್ನ ತಂದೆಗೆ ತಿಂಗಳಿಗೆ 20 ಸಾವಿರ ವರಮಾನ ಇದ್ದ ಬಗ್ಗೆ ನನ್ನ ಬಳಿ ದಾಖಲಾತಿ ಇರುವುದಿಲ್ಲ. ಸಾಕ್ಷಿಯು ಮುಂದುವರೆದು ನನ್ನ ತಂದೆಯ ಆದಾಯ ತೆರಿಗೆ ಪಾವತಿ ದಾಖಲೆ ಇರುತ್ತದೆ ಎಂದು ನುಡಿಯುತ್ತಾರೆ.

ಸದರಿ ದಾಖಲಾತಿಯನ್ನು ಹಾಜರು ಮಾಡಲು ನನಗೆ ಯಾವುದೇ ಅಭ್ಯಂತರ ಇರುವುದಿಲ್ಲ. ನನ್ನ ತಂದೆಗೆ 20 ಸಾವಿರ ರೂಪಾಯಿ ತಿಂಗಳಿಗೆ ಸಂಭಳ ಇತ್ತು ಮತ್ತು 55 ವರ್ಷ ವಯಸ್ಸಾಗಿತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ದಿನ ನನ್ನ ತಂದೆಯು ಆಟೋದಲ್ಲಿ ಪ್ರಯಾಣಿಸುತ್ತಿದ್ದರು. ಆಟೋ ಚಾಲನೆ ಮಾಡಲು ನನ್ನ ತಂದೆಗೆ ಯಾವುದೇ ಪರವಾನಿಗೆ ಇರಲಿಲ್ಲ ಎಂದರೆ ಸರಿಯಲ್ಲ. ಪರವಾನಿಗೆ ಇರದ ಕಾರಣ ವಿಮಾ ಕಂಪನಿಯು ಯಾವುದೇ ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ಅಪಘಾತದ ಬಗ್ಗೆ 1 ನೇ ಎದುರುದಾರರು ಮಾತ್ರ ಪರಿಹಾರ ನೀಡಲು ಬಾಧ್ಯಸ್ಥರು ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರವನ್ನು ಪಡೆಯುವ ಉದ್ದೇಶದಿಂದ ಸುಳ್ಳು ದಾಖಲಾತಿಯನ್ನು ಹಾಜರು ಪಡಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಂದೆಯ ಆದಾಯದ ಮೇಲೆ ನಾವು ಯಾರು ಅವಲಂಭಿತರಾಗಿರದ ಕಾರಣ ನಾವು ಪರಿಹಾರ ಪಡೆಯಲು ಅರ್ಹರಲ್ಲ ಎಂದರೆ ಸರಿಯಲ್ಲ. 3 ನೇ ಎದುರುದಾರರು ಕೂಲಿ ಕೆಲಸ ಮಾಡಿಕೊಂಡಿರುತ್ತಾರೆ.

ಪಾಟೀ ಸವಾಲು ಶ್ರೀ ಹೆಚ್.ಕೆ.ಡಿ ವಕೀಲರಿಂದ **1** ನೇ ಎದುರುದಾರರ ಪರವಾಗಿ

6. ಅಪಘಾತದ ಸಮಯದಲ್ಲಿ ಸದರಿ ಆಟೋ ರೀಕ್ಷಾಕ್ಕೆ ವಿಮಾ ಸೌಲಭ್ಯ ಇದ್ದ ಕಾರಣ 2 ನೇ ಎದುರುದಾರರೇ ಪರಿಹಾರ ನೀಡಲು ಬಾಧ್ಯಸ್ಥರು ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ